ಮೈಸೂರ ಗೆಜೆಟ್.

ನಂ. 46 ಸರ್ಕಾರದಿಂದ ಪ್ರಕಟಿಸಲ್ಪಟ್ಟದ್ದು. ಸನ್ 1889.

ಬೆಂಗಳೂರು, ಶನಿವಾರ, ನವೆಂಬರ್ ತಾ|| 16, ಸನ್ 1889.

ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೇ ವ ಇನಾಂ ಸೂಪರ್‌ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ್ ವರ್ಕಸ್ ಆಫಿಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜ್‌ರು, ಡಿ|| ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜ್‌ರು, ಪೊಲೀಸ್ ಸೂಪರಿಂಟೆಂಡೆಂಟರು, ಫಾರೆಸ್ಟು ಆಫಿಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥತೀ ರಿಪೋರ್ಟುಗಳು; ಪೋಸ್ಟಾಫಿಸ್ ನೋಟಿಸ್‌ಗಳು.

3ನೇ ಭಾಗ–ಶ್ರೀಮರ್ ಮಹಾರಾಜ ರಾಜಾಸಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇಷಣಗಳು—ಇಲ್ಲ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲ.

೧ನೆ ಭಾಗ.

ಶ್ರೀಮರ್ಮಮಹಾರಾಜ ರಾಜಾಸಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆ.

ಜನರಲ್.

ಇಸ್ತಿಹಾರ್‌ನಾಮೆ.

ತಾರೀಖು 28ನೇ ಅಕ್ಟೋಬರ್ 1889.

ನಂ. 220.—ಸಕಲ ಜನಗಳಿಗೂ ತಿಳಿಯುವ ಬ್ಯಾಗೆ ಇದರಿಂದ ಪ್ರಕಟಿಸಲ್ಪಡುವದೇನೆಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಕಾಯಂಗುತ್ತಿಗೆದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತಿ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಕಾಯಂಗುತ್ತಾ ಗ್ರಾಮಗಳು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಮುರುವಾಗಿ ಅಳಿಕೆ ಯಾವದೂ ಇಲ್ಲದೆ ಗ್ರಾಮವು ಜಡದರಬಾಸ್ತುದಾರರಿಗೆ ಹರಾಜೆ ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಜ್ಞಾಯೀ ಫೈಲಿ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜೆ ಹಾಕಿಸುವರು.

3. ಕ್ರಯದಾರನು ಹರಾಜೆ ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಕೀಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪೊಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರ ಜಮೀನುಗಳು ಆವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ಹರಿದಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುಖ್ತಾರೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುಖ್ತಾರೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರಜೂ ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ಮುವುಕೂಫ್ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮ್ಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಪರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಜಿಸ್ಟರ್ ಮಾಡಲ್ಪಟ್ಟು, ಡಿಸ್ಟ್ರಿಟ್ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಣಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಆಂದಾಜಾ ಬೀಜವರಿ ವಿಷಯದಲ್ಲಾಗಲಿ, ಇರುವ ಗಲ್ಲತಿಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಆಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಅಖೈರ್ ಹುಕುಮಿಗೆ ಸದರೀ ಕ್ರಯವು ಬಳಪಟ್ಟು ಇರುತ್ತೆ.

ಡಿಸ್ಟ್ರಿಕ್ಟ್ ತಾಲ್ಲೂಕ್ ಹೋಬಳಿ.	ಗ್ರಾಮ.	ಕಾಯಂಗುತ್ತಾದಾರರ ಹೆಸರು.	ಆಂದಾಜಾ ಬೀಜವರಿ.	ಆಂದಾಜಾ ಹುಟ್ಟುವಳಿ ಯಾ ಪೇರಿಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟೆರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಟ್ಟಿತ್ತೋ ಆಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಕೋಲಾರ ಜಿಲ್ಲೆ. ಬಂಗಾರಪೇಟೆ ತಾಲ್ಲೂಕು. ಜೋಡಿಕೆರೆ ಹೋಬಳಿ.	ಕಾಯಂಗುತ್ತಾದಾರರ ಗ್ರಾಮ. ಬೊಡ್ಡಂಗಲ್ಲು	ನಂಜುಂಡ ಶಾಸ್ತ್ರಿ ವಗೈರೇರು	ಎಕರೆ. ಸೆಂ. 351—33	ರೂ. ಆ. ಪೈ. 246 4 0 ಲೋಕಲ್ ಸೆಸ್	ರೂ. ಆ. ಪೈ. ಕಾಯಂಗುತ್ತಾ ಬಾಬತು 83 0 0 5 3 0 88 3 0	ರೂ. ಆ. ಪೈ. 226 13 2 ವ ಬಡ್ಡಿ ಸಹ	ಸ್ಯ 1889ನೇ ಇಸವಿ ಡಿಸೆಂಬರ್ ತಾ|| 2ರಲ್ಲು ತಾಲ್ಲೂಕು ಕಛೇರಿಯಲ್ಲಿ ಅಮಲ್ದಾರ್ರ ರೂಬರೂ.

ಪರಾ.—ಕಾಯಂಗುತ್ತಾದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಲಾಗಲಿ, ಉಂಟುವ್ಯವಹಾರಲ್ಪಟ್ಟ ತಮಾಂ ಹಿಡುವಳಿಗಳಿಗೂ, ದೇಣಿಗಳಿಗೂ ಮತ್ತು ಹಕ್ಕುಗಳಿಗೂ ಆಥವಾ ಮತ್ಯಾನ ಸಂಬಂಧಗಳಿಗೂ ಸದರೀ ಹರಾಜು ಬಳಪಟ್ಟಿರುವದಿಲ್ಲ.

ತಾರೀಖು 4ನೇ ನವಂಬರ್ 1889.

ನಂ. 228.—ತೀರ್ಥಹಳ್ಳಿ ತಾಲ್ಲೂಕು ಅಮಲ್ದಾರ್ ಜೆ. ಶ್ರೀನಿವಾಸರಾಯರಿಗೆ, ಸ್ಯ 1889ನೇ ಇಸವಿ ಸೆಪ್ಟಂಬರ್ 11ನೇ ಮುಕ್ತಂ 175ನೇ ನಂಬರುಳ್ಳ ಇಸ್ತಿಹಾರ್‌ನಾಮೆಯಿಂದ ಕೊಡೋಣಾಗಿದ್ದ 33 ದಿವಸಗಳ ಪ್ರಿವಿಲೀಜ್ ರಜಾವನ್ನು ಎರಡು ತಿಂಗಳ ವರೆವಿಗೂ ಜಾಸ್ತಿ ಮಾಡೋಣಾಗಿರುತ್ತೆ.

ನಂ. 229.—ಚಿತ್ರದುರ್ಗ ಡಿಸ್ಟ್ರಿಕ್ಟಿನ ಅಫಿಷಿಯೇಟಿಂಗ್ ಅಸಿಸ್ಟೆಂಟ್ ಕಮ್ಮಿಷನರ್ ವೆ.|| ಎಸ್. ವೆಂಕಟರಾಯರಿಗೆ, 1889ನೇ ಇಸವಿ ಆಗಸ್ಟ್ 20ನೇ ಮುಕ್ತಂ 133ನೇ ನಂಬರ್ ಇಸ್ತಿಹಾರಿನಿಂದ ಕೊಡೋಣಾಗಿದ್ದ ಮೆಡಿಕಲ್ ಸರ್ಟಿಫಿಕೇಟ್ ಮೇಲಣ ಎರಡು ತಿಂಗಳ ರಜಾಕ್ಕೆ ಜಾಸ್ತಿಯಾಗಿ ಇನ್ನೂ ಎರಡು ತಿಂಗಳೂ ಐದು ದಿವಸಗಳ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 7ನೇ ನವಂಬರ್ 1889.

ನಂ. 231.—ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ತಿಪಟೂರಲ್ಲಿರುವ ಮುನ್ಸಿಫರ್ ಬೆಂಗ್ಳೆಯು ಈ ಇಸ್ತಿಹಾರ್ ತಾರೀಖು ಆಗಾಯತು ಜಾರೀನೀ 1ನೇ ಕ್ಯಾಸ್ಸಿನಿಂದ 2ನೇ ಕ್ಯಾಸ್ ದರ್ಜೆಗೆ ಕಮ್ಮಿ ಮಾಡಲ್ಪಟ್ಟಿರುತ್ತೆ.

ತಾರೀಖು 6ನೇ ನವಂಬರ್ 1889.

ನಂ. 230.—ಸಕಲ ಜನಗಳಿಗೂ ತಿಳಿಯುವಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆಯಾವದೂ ಇಲ್ಲದೆ ಗ್ರಾಮವು ಚಡದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಚ್ಚಾಯ್ರೀ ವೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗ ಪೈಕಿ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್‌ಕ್ರಯದಾರನ ಖರ್ಚಿನಲ್ಲಿ ಆ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರ್ಫೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ತಿಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಪಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ಮವುಕೂಫ್ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜಿ ಖಾಯುಮ್ಮಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನ ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಪರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಅಂದಾಜಾ ಬೀಜವರೀ ವಿಷಯದ ಲೆಖ್ಖಗಳಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ ಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಆಜ್ಞೆಯ ಹುಕುಮಿಗೆ ಸದರೀ ಕ್ರಯವು ವಳಪಟ್ಟು ಯಿರುತ್ತೆ.

ಡಿಸ್ಟ್ರಿಕ್ಟು.	ತಾಲ್ಲೂಕು.	ಹೋಬ್ಳಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜಾ ಬೀಜವರೀ.	ಅಂದಾಜಾ ಹುಟ್ಟುವಳ್ಳೀ ಯಾಡಬೇರೀಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಕೋಲಾರ.	ಕೋಲಾರ.	ಕೋಲಾರ.	ಪೆಟ್ಟದಹೊಸಹಳ್ಳಿ ಜೋಡೀ ಗ್ರಾಮ.	ಡಿ. ಸೋಮಂಣ ವಗೈರೆರು	ಖಂ. ಕೂ. ಪ. 28 13 15½	ರೂ. ಆ. ಪೈ. 46 9 7	ರೂ. ಆ. ಪೈ. 44 12 10	ರೂ. ಆ. ಪೈ. 92 9 8 ಮತ್ತು ಬಡ್ಡೀ ಸಹ	1889ನೇ ಇಸವಿ ಡಿಶಂಬರ್ ತಾರೀಖು 9ರಲ್ಲು ತಾಲ್ಲೂಕ ಕಛೇರಿಯಲ್ಲಿ ಅಮಲ್ದಾರ್ರ ರೂಬರೂ.

ಪರಾ.—ಜೋಡೀದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಾಗಲಿ ಉಂಟುಮಾಡಲ್ಪಟ್ಟ ತಮೋಂ ಹಿಪುವಳಿಗಳಿಗೂ ದೇಣಿಗಳಿಗೂ ಮತ್ತು ಹಕ್ಕುಗಳಿಗೂ ಅಥವಾ ಮತ್ಯಾವ ಸಂಬಂಧಗಳಿಗೂ ಸದರೀ ಹರಾಜು ವಳಪಟ್ಟಿರುವದಿಲ್ಲ.

314

ತಾರೀಖು 8ನೇ ನವೆಂಬರ್ 1889.

ಕ್ಯಾಂಪ್ ನಂ. 715.—ಯಿದರಡಿ ಬರುವ ಮೊಕರಾತಿ ವರ್ಗವರ್ಗಿಗಳನ್ನು ಹುಕುಂ ಮಾಡೋಣಾಗಿರುತ್ತದೆ.

ದಿವಾಣರವರ ಚೀಫ್ ಸೆಕ್ರಟೇರಿಯವರಾದ ಮೆ॥ ಆರ್. ವಿಜಯೀಂದ್ರರಾಯರು ಯಕ್ಸೈಜ್ ಕಮ್ಮಿಷನರಾಗಿತಕ್ಕದ್ದು. ಯಿವರು ಕೂಡ್ಲೆ ಕೆಲಸದ ಮೇಲೆ ದಾಖಲಾಗತಕ್ಕದ್ದು.

ಎಕ್ಸೈಜ್ ಕಮ್ಮಿಷನರ್ ಕರ್ನಲ್ ಜೇ. ಎ. ಕ್ಯಾಂಬಲ್‌ಯವರು, ಕಡೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರ್ ವ ಡಿಸ್ಟ್ರಿಕ್ಟ್ ಮಾಜಿಸ್ಟ್ರೇಟರಾಗಿರತಕ್ಕದ್ದು.

ಕಡೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರ್ ಮೆ॥ ಜೇ. ಯಫ್. ಮೈಕಲ್‌ಜಾಯವರು, ಮೈಸೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರ್ ವ ಡಿಸ್ಟ್ರಿಕ್ಟ್ ಮಾಜಿಸ್ಟ್ರೇಟಿರಾಗಿರತಕ್ಕದ್ದು. ಇವರು ಕೂಡ್ಲೆ ಕೆಲಸದ ಮೇಲೆ ದಾಖಲಾಗತಕ್ಕದ್ದು.

ಮೈಸೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರ್ ಮೆ॥ ಟಿ. ಆನಂದರಾಯರು, ದಿವಾಣರವರ ಚೀಫ್ ಸೆಕ್ರಟೇರಿಯಾಗಿರತಕ್ಕದ್ದು.

ಮೆ॥ ಕೇ. ಮಹಮ್ಮದ್ ಅಲ್ಲಿಯವರು, ಮೈಸೂರು ಡಿಸ್ಟ್ರಿಕ್ಟ್ ಪೊಲೀಸ್ ಅಸಿಸ್ಟೆಂಟ್ ಕಮ್ಮಿಷನರಾಗಿರತಕ್ಕದ್ದು. ಇವರು ಕೂಡ್ಲೆ ಕೆಲಸದ ಮೇಲೆ ದಾಖಲಾಗತಕ್ಕದ್ದು.

ಮೆ॥ ಕೇ. ವೀ. ರಾಘವಾಚಾರ್ಲುಯವರು, ಕೋಲಾರ ಡಿಸ್ಟ್ರಿಕ್ಟ್ ಪೊಲೀಸ್ ಸೂಪರ್‌ಟಿಂಡೆಂಟರಾಗಿರತಕ್ಕದ್ದು. ಮೆ॥ ಮಹಮ್ಮದಲ್ಲಿಯವರು ಚಾರ್ಜ್ ವಹಿಸಿದ ಕೂಡ್ಲೆ ಇವರು ಕೆಲಸದ ಮೇಲೆ ಹೋಗತಕ್ಕದ್ದು.

ಮೈಸೂರು ಟರ್ಬಾಚಾರ್ಜಿನಲ್ಲಿರುವ ಅಸಿಸ್ಟೆಂಟ್ ಕಮ್ಮಿಷನರ್ ಮೆ॥ ಜೇ. ಡಬ್ಲ್ಯು. ನೈಟ್‌ಯವರು ಬೆಂಗಳೂರು, ಡಿಸ್ಟ್ರಿಕ್ಟಿನ ಪೊಲೀಸ್ ಅಸಿಸ್ಟೆಂಟ್ ಕಮ್ಮಿಷನರಾಗಿರತಕ್ಕದ್ದು.

ಫ್ರೆಂಚ್‌ರಾಕ್ಸ್ ಸಬ್ ಡಿವೀಜ್ ಚಾರ್ಜಿನಲ್ಲಿರುವ ಮೆ॥ ಬೀ. ತಿರುಮಲಾಚಾರ್ಯ, ಮೈಸೂರು ಟರ್ಬ ಮಾಜಿಸ್ಟ್ರೇಟ್ ವ ಮೈಸೂರು ಪಟ್ಟಣದ ಮ್ಯುನಿಸಿಪಲ್ ವೈಸ್ ಪ್ರೆಸಿಡೆಂಟರಾಗಿರತಕ್ಕದ್ದು.

ದಿವಾಣರವರ ಅಂಡರ್ ಸೆಕ್ರಟೆರಿ ಮೆ॥ ಕೆ. ಮಾದಯ್ಯನವರು, ಫ್ರೆಂಚ್ ರಾಕ್ಸ್ ಸಬ್ ಡಿವಿಜನಿನ ಆಫಿಸರಾಗಿರತಕ್ಕದ್ದು.

ಅಸಿಸ್ಟೆಂಟ್ ಕಮ್ಮಿಷನರ್ ಮೆ॥ ಯಚ್. ಕೃಷ್ಣರಾವ್ ಯಂ. ಎ. ಬೀ. ಯಲ್. ಯವರು, ದಿವಾಣರವರ ಅಂಡರ್ ಸೆಕ್ರಟೇರೀ ಕೆಲಸವನ್ನು ಆಕ್ಟಿಂಗ್ ತರೀಕು ನೋಡುವಂತೆ ಮೊಕರರ್ರಾಡಲ್ಪಟ್ಟಿತ್ತಾರೆ.

ಹುಕುಂ ಬಮೋಜಿಬ್,
ಆರ್. ವಿಜಯೀಂದ್ರರಾವ್,
ಚೀಫ್ ಸೆಕ್ರಟೆರಿ.

ವಿದ್ಯಾಭ್ಯಾಸದ ಇಲಾಖೆ.

ಸ್ಯ 1889ನೇ ಇಸವಿ ನವೆಂಬರ್ ತಾರೀಖು 14.

ಮೈಸೂರು ದೇಶೀಯ ಪರೀಕ್ಷೆ.

ಸ್ಯ 1890ನೇ ಇಸವೀಲಿ ನಡೆಯುವ ಮೈಸೂರು ದೇಶೀಯ ವಿದ್ಯಾರ್ಥಿಗಳ ಪರೀಕ್ಷೆಗಾಗಿ ಇದರಡಿ ಕಂಡಂತೆ ಬಹುಮಾನಗಳು ಕೊಡಲ್ಪಡುವವು:—

(1) ಯಡೇಹಳ್ಳಿ ಮುನ್ಸೀಫ್ ಕೋರ್ಟು ಗುಮಾಸ್ತೆ ಮೆ॥ ರಾ॥ ಎಚ್. ಶಾಮಣ್ಣನವರಿಂದ ,ಯಡೇಹಳ್ಳಿ ತಾಲ್ಲೂಕು ಗವರ್ನ್‌ಮೆಂಟ್ ಕನ್ನಡ ಸ್ಕೂಲಿನಿಂದ ತೇರ್ಗಡೆ ಹೊಂದುವವರ ಶೈಕಿ ಪದ್ಯಸಾರದಲ್ಲಿ ಅಧಿಕ ನಂಬರುಗಳನ್ನು ಹೊಂದುವಂಥಾ ಬಬ್ಬ ವಿದ್ಯಾರ್ಥಿಗೆ, ದೊಡ್ಡ ಅಕ್ಷರದ ಮೂಲ ಜೈಮಿನಿ.

(2) ಯಡೇಹಳ್ಳಿ ಮುನ್ಸೀಫ್ ಕೋರ್ಟು ಕಾಮೀಸ್ಟ್ಸ, ಮೆ॥ ರಾ॥ ಎಚ್. ಸೂರ್ಯನಾರಾಯಣಪ್ಪನವರಿಂದ, ಯಡೇಹಳ್ಳಿ ತಾಲ್ಲೂಕು ಗವರ್ನ್‌ಮೆಂಟ್ ಕನ್ನಡ ಸ್ಕೂಲಿನಿಂದ ತೇರ್ಗಡೆ ಹೊಂದುವವರ ಶೈಕಿ ವ್ಯಾಕರಣದಲ್ಲಿ ಅಧಿಕ ನಂಬರುಗಳನ್ನ ಪಡೆಯುವ ಬಬ್ಬ ವಿದ್ಯಾರ್ಥಿಗೆ ದುರ್ಗೇಶನಂದಿ.

(3) ಮೇಲ್ಕೋಟೆ ಗವರ್ನ್‌ಮೆಂಟ್ ಕನ್ನಡ ಸ್ಕೂಲ್ ಹೆಡ್‌ಮಾಸ್ಟರ್, ಮೆ॥ ರಾ॥ ಎಂ. ಜಿ. ಶಾಮಯ್ಯಂಗಾರ್ರವರಿಂದ ಮೇಲ್ಕೋಟೆ ಗವರ್ನ್‌ಮೆಂಟ್ ಕನ್ನಡ ಸ್ಕೂಲಿನಿಂದ ತೇರ್ಗಡೆ ಹೊಂದುವವರ ಶೈಕಿ ಅಧಿಕ ನಂಬರುಗಳನ್ನು ಪಡೆಯುವಂಥಾ ಬಬ್ಬ ವಿದ್ಯಾರ್ಥಿಗೆ, ಕನ್ನಡ ಲಿಂಗಾಭಟ್ಟೀಯ.

ಎಲ್. ರೈಸ್,
ಎಜ್ಯುಕೇಷನ್ ಸೆಕ್ರಟೆರಿ.